# ಹಂಪಿ ಟೈಮ್ಸ್
HAMPI TIMES

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA

ಕನ್ನಡ ದಿನಪತ್ರಿಕೆ
KANNADA DAILY



ಇಂದು ಹಾಗೂ ಹಿಂದಿನ ಹಂಪಿ ಟೈಮ್ಸ್ ಕಲರ್‌ಫುಲ್ ಇ-ದಿನಪತ್ರಿಕೆ ಓದಲು QR ಕೋಡ್ ಸ್ಕ್ಯಾನ್ ಮಾಡಿ ಓದಿರಿ

No.1 Leading in Local News Paper

NEWS PAPER ADS
THE BEST ADVERTISING
PLATFORM TO BOOST
YOUR BUSINESS

Book Your Ads Now!
M:94486 33038



ಸಂಪುಟ:01 • ಸಂಚಿಕೆ:326 • ನೋಂದಣಿ ನಂ.:KARKAN27911 • ವಿಜಯನಗರ • 29.05.2024 • ಬುಧವಾರ • ಪುಟ:04 • ಬೆಲೆ:2
Volume:01 • Issue:326 • Reg.No:KARKAN27911 • VIJAYANAGARA • 29.05.2024 • Wednesday • Page:04 • Rs:2


**ಮೈಕ್ರೋ ನ್ಯೂಸ್**

## ಆರೋಗ್ಯ ಇಲಾಖೆ ವತಿಯಿಂದ ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ

**ಹಂಪಿ ಟೈಮ್ಸ್ ಹೊಸಪೇಟೆ**

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ವಿಶ್ವ ಋತುಚಕ್ರ ನೈರ್ಮಲ್ಯ ದಿನಾಚರಣೆ ಕಾರ್ಯಕ್ರಮವು ನಗರದ ಜಿಲ್ಲಾ ಅರೋಗ್ಯ ಮತ್ತು ಕುಟುಂಬ ಕಲ್ಯಾಣ ಕಚೇರಿಯಲ್ಲಿ ಮೇ 28ರಂದು ನಡೆಯಿತು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಶಂಕರ್ ನಾಯಕ್ ಅವರು ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, 11 ರಿಂದ 14 ವರ್ಷದ ಹೆಣ್ಣುಮಕ್ಕಳಲ್ಲಿ ಪ್ರಾರಂಭವಾಗುವ ಋತುಚಕ್ರದ ಕುರಿತು ಪ್ರತಿಯೊಬ್ಬ ಕಿಶೋರಿಯಿಂದ ಹಿಡಿದು ಎಲ್ಲ ಮಹಿಳೆಯರು ಜಾಗೃತಿ ಹೊಂದಬೇಕು. ಋತುಸ್ರಾವವಾದಾಗ ವೈಯಕ್ತಿಕ ಸ್ವಚ್ಛತೆಯ ಬಗ್ಗೆ ಹೆಚ್ಚಿನ ಗಮನ ಹರಿಸಬೇಕು. ವಿಶ್ವ ಆರೋಗ್ಯ ಸಂಸ್ಥೆಯು ಪ್ರತಿ ವರ್ಷ ಹೊಸದಾದ ಘೋಷಣೆಯೊಂದಿಗೆ ತಿಳಿಸುವ ವಿಶ್ವ ಋತುಚಕ್ರದ ನೈರ್ಮಲ್ಯ ದಿನದ ಮಹತ್ವವನ್ನು ಪ್ರತಿಯೊಬ್ಬರು ಅರಿಯಬೇಕು ಎಂದು ಸಲಹೆ ಮಾಡಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಜಂಬಯ್ಯ ಅವರು ಮಾತನಾಡಿ, ಪ್ರತಿಯೊಬ್ಬ ಪ್ರಜೆ ಋತುಚಕ್ರದ ಕುರಿತು ಅರಿವು ಪಡೆದು ಜ್ಞಾನವಂತರಾಗಬೇಕು. ಮೂಢ ನಂಬಿಕೆಯನ್ನು ಹೋಗಲಾಡಿಸಬೇಕು. >>3

# ಬೀಜೋತ್ಪಾದನೆ ಕುಂಠಿತದಿಂದ ಬಿತ್ತನೆ ಬೀಜಗಳ ದರ ಹೆಚ್ಚಳ

### ನೆರೆಯ ರಾಜ್ಯಗಳ ಹೋಲಿಕೆಯಲ್ಲಿ ರಾಜ್ಯದಲ್ಲಿ ದರ ಕಡಿಮೆ ಎಂದ ಕೃಷಿ ಇಲಾಖೆ

**ಹಂಪಿ ಟೈಮ್ಸ್ ಬೆಂಗಳೂರು**

2023-24ನೇ ಸಾಲಿನ ಭೀಕರ ಬರಗಾಲದಿಂದಾಗಿ ರಾಜ್ಯದಲ್ಲಿ ಬೀಜೋತ್ಪಾದನೆ ಗಣನೀಯವಾಗಿ ಕುಂಠಿತವಾಗಿದ್ದು, ಬೀಜೋತ್ಪಾದಕರಿಂದ ಖರೀದಿಸುವ ಬಿತ್ತನೆ ಬೀಜದ ದರಗಳು ಸಹ ಗಣನೀಯವಾಗಿ ಏರಿಕೆಯಾಗಿದೆ. ಈ ಹಿನ್ನೆಲೆಯಲ್ಲಿ ಬಿತ್ತನೆ ಬೀಜದ ಮಾರಾಟದ ದರ ಏರಿಕೆಯಾಗಿದೆ. ಈ ದರ ಏರಿಕೆ ಮುಂಗಾರು ಬೆಳೆ ಬೆಳೆಯುವ ಎಲ್ಲ ರಾಜ್ಯಗಳಲ್ಲಿಯೂ ಆಗಿದ್ದು ಉಳಿದ ರಾಜ್ಯಗಳಿಗೆ ಹೋಲಿಸಿದರೆ ನಮ್ಮಲ್ಲಿ ಬೀಜಗಳ ದರ ಕಡಿಮೆ ಇದೆ.

ಬಿತ್ತನೆ ಬೀಜಗಳ ಮಾರಾಟ ದರಗಳನ್ನು ನಿಗದಿಪಡಿಸುವ ಸಂದರ್ಭಗಳಲ್ಲಿ ಬಿತ್ತನೆ ಬೀಜ ಖರೀದಿ ದರಗಳು ಹಾಗೂ ಗರಿಷ್ಠ APMC ಮಾರಾಟ ದರಗಳನ್ನು ಆಧಾರವಾಗಿ ಪರಿಗಣಿಸಲಾಗುತ್ತದೆ. 2022-23ನೇ ಸಾಲಿಗೆ ಹೋಲಿಸಿದಾಗ 2023-24ನೇ ಸಾಲಿನಲ್ಲಿ ವಿವಿಧ ಬೆಳೆಗಳ ಖರೀದಿ ದರಗಳಲ್ಲಿ (Procurement Rates) ಗರಿಷ್ಠ ಶೇ.59.58ರಷ್ಟು ವ್ಯತ್ಯಾಸವಾಗಿರುತ್ತದೆ.

ಈ ಬಾರಿ ಹೆಸರು ಬೆಳೆಯ ಬಿತ್ತನೆ ಬೀಜಗಳ ಎಲ್-1 ದರವು ಶೇ.48.5, ಉದ್ದು ಬೆಳೆಯ ದರವು ಶೇ.37.72, ತೊಗರಿ ಬೆಳೆಯ ವಿವಿಧ ತಳಿಗಳ ಬಿತ್ತನೆ ಬೀಜಗಳ ದರದಲ್ಲಿ ಶೇ.28.29 ರಿಂದ 37.69ರಷ್ಟು ಮತ್ತು ಜೋಳದ ಬೆಳೆಯ ಎಲ್-1 ದರವು ಶೇ.7.66 ರಿಂದ ಶೇ.33.33ರಷ್ಟು ಹೆಚ್ಚಾಗಿರುತ್ತದೆ. ಬೀಜಗಳ ಖರೀದಿ ದರದಲ್ಲಿನ ಹೆಚ್ಚಳದ ಮೊತ್ತವು ಬೀಜೋತ್ಪಾದನೆಯಲ್ಲಿ ತೊಡಗಿರುವ ರೈತರಿಗೆ ವರ್ಗಾವಣೆಯಾಗಿರುತ್ತದೆ ಎನ್ನುವುದು ಗಮನಾರ್ಹ ಅಂಶವಾಗಿದೆ.



ಇದಲ್ಲದೆ ಕೆಲ ಬಿತ್ತನೆ ಬೀಜದ ದರದಲ್ಲಿ ಇಳಿಕೆ ಹಾಗೂ ಯಥಾಸ್ಥಿತಿ ಕೂಡ ಕಂಡುಬಂದಿದೆ. 2024ರ ಮುಂಗಾರು ಹಂಗಾಮಿನ ಸೋಯಾ ಅವರೆ ಬಿತ್ತನೆ ಬೀಜದ ದರವು 2023ರ ಮುಂಗಾರು ಹಂಗಾಮಿನ ಎಲ್-1 ದರಗಳ ಹೋಲಿಕೆಯಲ್ಲಿ ಶೇ.8ರಷ್ಟು ಕಡಿತಗೊಂಡಿರುತ್ತದೆ. ಸೂರ್ಯಕಾಂತಿ ಬಿತ್ತನೆ ಬೀಜದ ದರ ಕಳೆದ ಸಾಲಿನಷ್ಟೇ ಇದ್ದು ಯಾವುದೇ ಬದಲಾವಣೆ ಇರುವುದಿಲ್ಲ. ಬಿ.ಟಿ. ಹತ್ತಿ ಬಿತ್ತನೆ ಬೀಜಗಳನ್ನು ರಾಜ್ಯ ಸರ್ಕಾರದ ಇಲಾಖಾ ವತಿಯಿಂದ ರಿಯಾಯತಿ ದರದಲ್ಲಿ ವಿತರಣೆ ಮಾಡುತ್ತಿರುವುದಿಲ್ಲ. ಬಿ.ಟಿ. ಹತ್ತಿ ಬಿತ್ತನೆ ಬೀಜಗಳ ಗರಿಷ್ಠ ದರಗಳನ್ನು ಕೇಂದ್ರ ಸರ್ಕಾರದ ವತಿಯಿಂದಲೇ ನಿಗದಿಪಡಿಸಲಾಗುತ್ತದೆ.

ರಾಜ್ಯದಲ್ಲಿನ ವಿವಿಧ ಬೆಳೆಗಳ ಬಿತ್ತನೆ ಬೀಜಗಳಲ್ಲಿನ ದರ ವ್ಯತ್ಯಾಸವು 2023ರ ಹೋಲಿಕೆಯಲ್ಲಿ ಈ ಬಾರಿ ಗರಿಷ್ಠ ಶೇ.48.50ರಷ್ಟಿದೆ. ಆದಾಗ್ಯೂ, ನೆರೆಯ ರಾಜ್ಯಗಳಲ್ಲಿನ ಪ್ರಸಕ್ತ ಸಾಲಿನ ಬಿತ್ತನೆ ಬೀಜಗಳ ದರಗಳ ಏರಿಕೆಯ ಹೋಲಿಕೆಯಲ್ಲಿ ರಾಜ್ಯದಲ್ಲಿನ ಬಿತ್ತನೆ ಬೀಜಗಳ ದರದ ಏರಿಕೆಯು ಕಡಿಮೆಯಾಗಿರುತ್ತದೆ.

ರಾಜ್ಯದಲ್ಲಿ ಮುಂಗಾರು ಪೂರ್ವ ಮಳೆಯು ಉತ್ತಮವಾಗಿ ಆಗುತ್ತಿದ್ದು ಕೃಷಿ ಚಟುವಟಿಕೆಗಳು ಗರಿಗೆದರಿವೆ. ಇದೇ ವೇಳೆ, ಬಿತ್ತನೆ ಬೀಜಗಳ ದರಗಳು ಏರಿಕೆಯಾಗಿರುವ ಬಗ್ಗೆ ವಿವಿಧ ಮಾಧ್ಯಮಗಳಲ್ಲಿ ವರದಿಯಾಗುತ್ತಿದ್ದು ಈ ಕುರಿತು ಕೃಷಿ ಇಲಾಖೆಯು ಸ್ಪಷ್ಟೀಕರಣ ನೀಡಿದ್ದು ವಾಸ್ತವ ಸ್ಥಿತಿಯನ್ನು ವಿವರಿಸಿದೆ.

> ಮಹಾರಾಷ್ಟ್ರದಲ್ಲಿ ಸೋಯಾಅವರೆ ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ಎಲ್-1 ದರವು ರೂ.8500/- ನಿಗದಿಯಾಗಿದ್ದು ಕರ್ನಾಟಕದಲ್ಲಿ ಇದು ರೂ.7270/- ನಿಗದಿಯಾಗಿದೆ. ತೊಗರಿ ಬೆಳೆಗೆ ಮಹಾರಾಷ್ಟ್ರದಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.25,000/- ಇದ್ದು ಕರ್ನಾಟಕದಲ್ಲಿ ಪ್ರತಿ ಕ್ವಿಂಟಾಲ್‌ಗೆ ರೂ.17,900/- ನಿಗದಿಪಡಿಸಲಾಗಿದೆ. ಹೆಸರು ಮತ್ತು ಜೋಳದ ಬೆಳೆಗೆ ಪ್ರತಿ ಕ್ವಿಂಟಾಲ್‌ಗೆ ಮಹಾರಾಷ್ಟ್ರದಲ್ಲಿ ಕ್ರಮವಾಗಿ ರೂ.23,500/- ರೂ. 14,000/- ಇದ್ದು ಕರ್ನಾಟಕದಲ್ಲಿ ಕ್ರಮವಾಗಿ ರೂ.18,600/- ರೂ.12,500/- ನಿಗದಿಪಡಿಸಲಾಗಿದೆ. ಈ ಹೋಲಿಕೆಯಲ್ಲಿ ರಾಜ್ಯದಲ್ಲಿ ಪ್ರಸಕ್ತ ಸಾಲಿನಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜಗಳ ದರಗಳು ಗಣನೀಯವಾಗಿ ಕಡಿಮೆ ಇರುವುದು ಕಂಡುಬರುತ್ತದೆ.

# ಕ್ಯಾನ್ಸರ್ ಸೆಂಟರ್ ಸ್ಥಳಾಂತರಿಸಿ

### ಬಸವೇಶ್ವರ ಬಡಾವಣೆ ನಿವಾಸಿಗಳ ಆಗ್ರಹ



**ಹಂಪಿ ಟೈಮ್ಸ್ ಹೊಸಪೇಟೆ**

ನಗರದ ಹೃದಯಭಾಗ ಜನವಸತಿ ಪ್ರದೇಶ ಬಸವೇಶ್ವರ ಬಡಾವಣೆಯಲ್ಲಿ ಗ್ಲೋಬಲ್ ಕ್ಯಾನ್ಸರ್ ವೀಕ್ಷಣಾಲಯವನ್ನು (ಕ್ಯಾನ್ಸರ್ ಸೆಂಟರ್) ಪ್ರಾರಂಭಿಸಲು ಸಿದ್ಧತೆ ನಡೆಯುತ್ತಿದ್ದು, ಜನರ ಆರೋಗ್ಯ ದೃಷ್ಠಿಯಿಂದ ಕೂಡಲೇ ಕ್ಯಾನ್ಸರ್ ಸೆಂಟರ್‌ನ್ನು ಸ್ಥಳಾಂತರಿಸಬೇಕೆಂದು ಒತ್ತಾಯಿಸಿ ಬಸವೇಶ್ವರ ಬಡಾವಣೆ ಕಲ್ಯಾಣ ಸಂಘದ ಪದಾಧಿಕಾರಿಗಳು ಅಪರ ಜಿಲ್ಲಾಧಿಕಾರಿ ಜೆ.ಅನುರಾಧ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು.

> ಡಾ.ವಸ್ತ್ರಾದ ಅವರ ಹಳೇ ಆಸ್ಪತ್ರೆಯಲ್ಲಿ ಕ್ಯಾನ್ಸರ್ ಸೆಂಟರ್ ತೆರೆಯಲು ಸ್ಥಳೀಯ ನಿವಾಸಿಗಳ ವಿರೋಧ

ಸಂಘದ ಅಧ್ಯಕ್ಷ ಡಾ.ಕೆ.ರೇವಣಸಿದ್ದಪ್ಪ ಮಾತನಾಡಿ, ನಗರದ ಹಿರಿಯ ವೈದ್ಯ ಡಾ.ವಸ್ತ್ರಾದ ಮೂರು ದಶಕಗಳಿಂದ ಅವರು ಬಸವೇಶ್ವರ ಬಡಾವಣೆಯಲ್ಲಿದ್ದ ಅವರ ಅಭಿಷೇಕ್ ಆಸ್ಪತ್ರೆಯಲ್ಲೆ ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿದ್ದರು. ನಗರದ ಹೊರವಲಯದಲ್ಲಿ ನೂತನವಾಗಿ ನಿರ್ಮಿಸಿಕೊಂಡ ಆಸ್ಪತ್ರೆಯಲ್ಲೆ ಇದೀಗ ಚಿಕಿತ್ಸೆ ನೀಡುತ್ತಿದ್ದಾರೆ. ಕಳೆದ ಒಂದು ವರ್ಷದಿಂದ ಬಸವೇಶ್ವರ ಬಡಾವಯಲ್ಲಿ ಖಾಲಿ ಇದ್ದ ಈ ಆಸ್ಪತ್ರೆಯನ್ನು ಇದೀಗ ಕ್ಯಾನ್ಸರ್ ಸೆಂಟರ್ ತೆರೆಯಲು ಬಾಡಿಗೆಗೆ ನೀಡಿದ್ದಾರೆ. ಜನರ ಹಗಲಿರುಳು ವಾಸಿಸುವ ಜನವಸತಿ ಪ್ರದೇಶದ ಮದ್ಯೆ ಕ್ಯಾನ್ಸರ್ ಆಸ್ಪತ್ರೆ ತೆರೆದರೆ ಜನರ ಆರೋಗ್ಯದ ಮೇಲೂ ಪರಿಣಾಮ ಬೀರಲಿದ್ದು ಮತ್ತು ಮಾನಸಿಕ ಖಿನ್ನತೆಗೊಳಗಾಗುವ ಸಾಧ್ಯತೆಯೂ ಇದೆ. ಸಾಮಾನ್ಯವಾಗಿ ಕ್ಯಾನ್ಸರ್ ಸೆಂಟರ್‌ಗಳು ಜನವಸತಿ ಪ್ರದೇಶಗಳಿಂದ ದೂರ ಇರುತ್ತವೆ. ಬಡವಾಣೆ ನಿವಾಸಿಗಳ ಮನವಿಯನ್ನು ಪುರಸ್ಕರಿಸಿ, ಈಗ ತೆರೆಯಲು ಉದ್ದೇಶಿತ ಸ್ಥಳದಿಂದ ಕ್ಯಾನ್ಸರ್ ಸೆಂಟರ್‌ನ್ನು ಸ್ಥಳಾಂತರಿಸಬೇಕೆಂದು ಆಗ್ರಹಿಸಿದರು.

ಸಂಘದ ಕಾರ್ಯದರ್ಶಿ ಎನ್.ಎಸ್.ರೇವಣಸಿದ್ದಪ್ಪ, ಬಡಾವಣೆಯ ಮುಖಂಡರಾದ ಬಸಪ್ಪ, ಅರವಿಂದ ಕುಲಕರ್ಣಿ, ರವಿ, ಜಡಿಯಪ್ಪ, ಟಿ.ಯೋಗಾನಂದ ಇತರರಿದ್ದರು.


